212. ತಾಯಿ ಮತ್ತು ಶಿಶು ಮರಣ ಪ್ರಮಾಣವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ, 41 ತಾಯಿ ಮತ್ತು ಶಿಶು ಆರೋಗ್ಯ ರಕ್ಷಣಾ ಕೇಂದ್ರಗಳಲ್ಲಿನ **(MCH Units)** ಹಾಸಿಗೆ ಸಾಮರ್ಥ್ಯವನ್ನು ಮುಂದಿನ 3 ವರ್ಷಗಳ ಅವಧಿಯಲ್ಲಿ ಹೆಚ್ಚುವರಿಯಾಗಿ 2500 ಸಂಖ್ಯಾಬಲಕ್ಕೆ ಹೆಚ್ಚಿಸಲು ಉದ್ದೇಶಿಸಲಾಗಿದೆ. ಈ ಕಾರ್ಯಕ್ರಮವನ್ನು ಆರ್.ಐ.ಡಿ.ಎಫ್. ಹಾಗೂ ಎನ್.ಆರ್.ಹೆಚ್.ಎಂ. ಯೋಜನೆಯಡಿ ಕೈಗೊಳ್ಳಲಾಗುವುದು.

213. 32.50 ಲಕ್ಷ ಯುವತಿಯರಿಗೆ ಋತುಚಕ್ರ ಸಂದರ್ಭದಲ್ಲಿ ಶುಚಿತ್ವ ಕಾಪಾಡಲು 10 ಸ್ಯಾನಿಟರಿ ನ್ಯಾಪ್‌ಕಿನ್ ಪ್ಯಾಡ್‌ಗಳನ್ನು ಉಚಿತವಾಗಿ ಸರಬರಾಜು ಮಾಡಲು ಉದ್ದೇಶಿಸಿದೆ.

214. ಗುಲ್ಬರ್ಗದಲ್ಲಿ ಹೊಸ ಸರ್ಕಾರಿ ಔಷಧ ಮಹಾವಿದ್ಯಾಲಯವನ್ನು ಸ್ಥಾಪಿಸಲಾಗುವುದು.

215. ಕ್ಷಯ ರೋಗಿಗಳಿಗೆ ಮತ್ತು ಹೆಚ್‌ಐವಿ ಪೀಡಿತರಿಗೆ ನ್ಯಾಯ ಬೆಲೆ ಅಂಗಡಿಗಳ ಮುಖಾಂತರ ವಸ್ತುಗಳ ರೂಪದಲ್ಲಿ ಪೌಷ್ಠಿಕ ಆಹಾರದ ಬೆಂಬಲವನ್ನು ನೀಡಲಾಗುವುದು. ಈ ಯೋಜನೆಯಿಂದ ಸುಮಾರು 70,000 ಕ್ಷಯ ರೋಗಿಗಳು ಮತ್ತು 93,000 ಹೆಚ್‌ಐವಿ ಪೀಡಿತರಿಗೆ ಪ್ರಯೋಜನವಾಗಲಿದೆ.

216. ಕರ್ನಾಟಕದ ಕರಾವಳಿ ಪ್ರದೇಶಗಳಲ್ಲಿ ಎಂಡೋಸಲ್ಫಾನ್‌ನಿಂದ ಬಾಧಿತರಾದ ಜನರ ಸಮೀಕ್ಷೆ ನಡೆಸಿ ಅವರಿಗೆ ಪುನರ್‌ವಸತಿ ಯೋಜನೆಯ ಮೂಲಕ ಶಾಶ್ವತ ಪರಿಹಾರ ಕಲ್ಪಿಸಲಾಗುವುದು.

217. ಎಲ್ಲಾ ಸ್ವಾತಂತ್ರ್ಯಯೋಧರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಆರೋಗ್ಯ ಸೇವೆ ಮತ್ತು ಚಿಕಿತ್ಸೆ ಒದಗಿಸಲಾಗುವುದು.



218. ಬೆಳಗಾವಿ ಮತ್ತು ಮೈಸೂರಿನ ಪ್ರಾದೇಶಿಕ ಆಹಾರ ಪ್ರಯೋಗಾಲಯಗಳನ್ನು ಉನ್ನತೀಕರಿಸಲಾಗುವುದು.

219. ಕೇಂದ್ರ ಸರ್ಕಾರದ ನೆರವಿನೊಂದಿಗೆ 127 ಕೋಟಿ ರೂ.ಗಳ ವೆಚ್ಚದಲ್ಲಿ ನಗರ ಪ್ರದೇಶಗಳಲ್ಲಿ ಎನ್.ಯು.ಹೆಚ್.ಎಂ. ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

220. **ಆರೋಗ್ಯ ಕವಚ** – 108 ಯೋಜನೆಯಡಿ 2011ರ ಜನಗಣತಿ ಆಧಾರದ ಮೇಲೆ 1 ಲಕ್ಷ ಜನರಿಗೆ ಒಂದು ವಾಹನದಂತೆ ಅಗತ್ಯವಿರುವ ಹೆಚ್ಚುವರಿ ವಾಹನಗಳನ್ನು ಒದಗಿಸಲಾಗುವುದು.

221. ರಾಜೀವಗಾಂಧಿ ಆರೋಗ್ಯ ವಿಶ್ವವಿದ್ಯಾನಿಲಯದಡಿ ನಾಲ್ಕು ವೈದ್ಯಕೀಯ ಕಾಲೇಜುಗಳನ್ನು ಸೂಕ್ತ ವ್ಯವಸ್ಥೆಯೊಂದಿಗೆ ಮುಂದಿನ ವರ್ಷದಿಂದ ಕಾರವಾರ, ಕೊಡಗು, ಕೊಪ್ಪಳ ಮತ್ತು ಚಾಮರಾಜನಗರದಲ್ಲಿ ಆರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದು.

222. ಮೈಸೂರು ಮತ್ತು ಗುಲ್ಬರ್ಗದಲ್ಲಿರುವ ವೈದ್ಯಕೀಯ ಕಾಲೇಜುಗಳಲ್ಲಿ ಟ್ರಾಮಾ ಸೆಂಟರ್‌ಗಳನ್ನು ಸ್ಥಾಪಿಸಲಾಗುವುದು.

223. ಗುಲ್ಬರ್ಗದಲ್ಲಿ ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಯ ಪೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು ಮೇಲ್ದರ್ಜೆಗೇರಿಸಲಾಗುವುದು.

224. ಬೆಂಗಳೂರಿನ ಶಂಕರ ಕ್ಯಾನ್ಸರ್ ಆಸ್ಪತ್ರೆಗೆ 10 ಕೋಟಿ ರೂ. ಒದಗಿಸಲಾಗುವುದು.

225. 2013–14ನೇ ಸಾಲಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ವಲಯಕ್ಕೆ 5,421 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

## ಆರೋಗ್ಯ, ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ

201. ಆರೋಗ್ಯವಂತ ಸಮುದಾಯವು ರಾಜ್ಯದ ಅಮೂಲ್ಯ ಸಂಪತ್ತು. ರಾಜ್ಯದ ಜನಸಮುದಾಯಕ್ಕೆ ಆರೋಗ್ಯ ಸವಲತ್ತುಗಳನ್ನು ಒದಗಿಸಲು ಸರ್ಕಾರವು ಶಕ್ತಿ ಮೀರಿ ಶ್ರಮಿಸುತ್ತದೆ. ಈ ನಿಟ್ಟಿನಲ್ಲಿ ಈ ಕೆಳಕಂಡ ಆರೋಗ್ಯ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

202. ಪ್ರಸ್ತುತ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಆಯುಷ್ ಆರೋಗ್ಯ ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಇವುಗಳ ಜೊತೆಗೆ ಹೆಚ್ಚುವರಿಯಾಗಿ ಪ್ರತಿ ಜಿಲ್ಲೆಯ ಒಂದು ತಾಲ್ಲೂಕಿನಲ್ಲಿ ಆಯುಷ್ ಘಟಕ ಸ್ಥಾಪಿಸಲು ಉದ್ದೇಶಿಸಿದೆ. ಇದರ ಜೊತೆಗೆ, ನಾಲ್ಕು ಕಂದಾಯ ವಿಭಾಗಗಳಲ್ಲಿ ನಾಲ್ಕು ಆಯುಷ್ ಸಂಚಾರಿ ಘಟಕಗಳನ್ನು ಸ್ಥಾಪಿಸಲಾಗುವುದು.

203. 35,000 ಆಶಾ ಕಾರ್ಯಕರ್ತೆಯರಿಗೆ ಕೇಂದ್ರ ಸರ್ಕಾರವು ನೀಡುತ್ತಿರುವ ಪ್ರೋತ್ಸಾಹ ಧನದ ಜೊತೆಗೆ ರಾಜ್ಯ ಸರ್ಕಾರವೂ ಸಹ ಪ್ರೋತ್ಸಾಹ ಧನ ನೀಡುವ ಬಗ್ಗೆ ಪರಿಶೀಲಿಸುವುದು.

204. ಪ್ರತಿ ಜಿಲ್ಲೆಯ ಒಂದು ತಾಲ್ಲೂಕು ಆಸ್ಪತ್ರೆಯಲ್ಲಿ ಡಯಾಲಿಸಿಸ್ ಘಟಕವನ್ನು ಸ್ಥಾಪಿಸಲಾಗುವುದು.

205. ಬೆಂಗಳೂರಿನಲ್ಲಿ ಭಾರತೀಯ ಸಾರ್ವಜನಿಕ ಆರೋಗ್ಯ ಸಂಸ್ಥೆಯನ್ನು ಸ್ಥಾಪಿಸುವುದರ ಮೂಲಕ ಆರೋಗ್ಯ ಸೇವೆಗಳನ್ನು ಬಲಪಡಿಸಲಾಗುವುದು.

206. ಜೆನೆರಿಕ್ ಔಷಧಗಳು ಬ್ರಾಂಡೆಡ್ ಔಷಧಿಗಳಿಗಿಂತ ಶೇ.40 ರಿಂದ ಶೇ.50ರಷ್ಟು ಅಗ್ಗವಾಗಿವೆ. ಆದುದರಿಂದ ನಮ್ಮ ಸರ್ಕಾರವು ಪ್ರತಿ ತಾಲ್ಲೂಕಿಗೆ ಒಂದರಂತೆ ಜೆನೆರಿಕ್ ಔಷಧಿಗಳ ಮಳಿಗೆಗಳನ್ನು ಸ್ಥಾಪಿಸುವುದು.

207. ಕೆ.ಸಿ.ಜನರಲ್ ಆಸ್ಪತ್ರೆ, ಜಯನಗರ ಸಾರ್ವಜನಿಕ ಆಸ್ಪತ್ರೆ ಮತ್ತು ಸಂಜಯಗಾಂಧಿ ಅಪಘಾತ ಮತ್ತು ಅಸ್ಥಿ ಚಿಕಿತ್ಸಾ ಸಂಸ್ಥೆಗಳಲ್ಲಿ ಇ–ಆಸ್ಪತ್ರೆ ತಂತ್ರಾಂಶವನ್ನು ಅಳವಡಿಸಲಾಗುವುದು.

208. ಗದಗದಲ್ಲಿರುವ ಸರ್ಕಾರಿ ಹೆರಿಗೆ ಆಸ್ಪತ್ರೆಯ ಆಧುನೀಕರಣ ಮತ್ತು ವಿಸ್ತರಣೆಗಾಗಿ 8 ಕೋಟಿ ರೂ. ಒದಗಿಸಲಾಗುವುದು.

209. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದಲ್ಲಿ ಪತ್ರ ನಿರ್ವಹಣಾ ವ್ಯವಸ್ಥೆ ಮತ್ತು ಕಡತ ನಿರ್ವಹಣಾ ವ್ಯವಸ್ಥೆಯುಳ್ಳ ಇ–ಆಡಳಿತ ತಂತ್ರಾಂಶವನ್ನು ಅಳವಡಿಸಲಾಗುವುದು.

210. ರಾಜ್ಯದಲ್ಲಿ ತೀವ್ರವಾದ ಮಾನಸಿಕ ಕಾಯಿಲೆಯುಳ್ಳ ರೋಗಿಗಳ ಆರೈಕೆಗೆ ಲಭ್ಯವಿರುವ ಹಾಸಿಗೆಗಳ ಸಂಖ್ಯೆ ಕಡಿಮೆಯಿದೆ. ಆದ್ದರಿಂದ ಎಲ್ಲಾ ಜಿಲ್ಲೆಗೆ ಒಂದರಂತೆ ಮಾನಸಿಕ ರೋಗಿಗಳಿಗೆ ವಸತಿ ಸೌಲಭ್ಯವುಳ್ಳ ಪಾಲನಾ ಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

211. ಬಿಪಿಎಲ್ ವರ್ಗಕ್ಕೆ ಸೇರದಿರುವ ವಿವಿಧ ಕಾರ್ಮಿಕ ವರ್ಗಗಳು ಹಾಗೂ ಜನಸಮುದಾಯಗಳು ಈಗ ಸುಸಜ್ಜಿತ ಮೇಲ್ದರ್ಜೆ ಆಸ್ಪತ್ರೆಯ ಆರೋಗ್ಯ ಸವಲತ್ತುಗಳಿಂದ ವಂಚಿತರಾಗಿದ್ದಾರೆ. ಈ ಜನವರ್ಗದವರಿಗೂ ಸಹ ಇಂತಹ ಆರೋಗ್ಯ ಸವಲತ್ತುಗಳನ್ನು ಒದಗಿಸಲು ಆರೋಗ್ಯವಿಮೆ / ಭಾಗೀದಾರರ ಕೊಡುಗೆಯನ್ನು ಆಧರಿಸಿ ಒಂದು ನೂತನ ಆರೋಗ್ಯ ಯೋಜನೆಯನ್ನು ರೂಪಿಸಲಾಗುವುದು.